ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 03–09–2018**

## ಪತ್ರಿಕಾ ಆಮಂತ್ರಣ

1. ಕೃಷಿಕರ ಕೈಗೆ ಲೇಖನಿ:
ರಾಜ್ಯ ಮಟ್ಟದ ತರಬೇತಿ ಕಾರ್ಯಕ್ರಮ ಉದ್ಘಾಟನೆ
ಕೃಷಿ ಪತ್ರಿಕೋದ್ಯಮ ಪುಸ್ತಕ ಬಿಡುಗಡೆ:

ಉದ್ಘಾಟನೆ:
ಡಾ: ಬಿ. ವೈ. ಶ್ರೀನಿವಾಸ್, ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು

ಪುಸ್ತಕ ಬಿಡುಗಡೆ:
ಈಶ್ವರ ದೈತೋಟ, ಖ್ಯಾತ ಪತ್ರಕರ್ತರು

ಅಧ್ಯಕ್ಷತೆ:
ಡಾ: ಎಂ. ಎಸ್. ನಟರಾಜು, ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು

ದಿನಾಂಕ: 04–09–2018, ಮಂಗಳವಾರ, ಸಮಯ: ಬೆಳಿಗ್ಗೆ 10–00 ಗಂಟೆಗೆ
ಸ್ಥಳ: ಸಿಬ್ಬಂದಿ ತರಬೇತಿ ಘಟಕ, ಹೆಬ್ಬಾಳ (ಪಶುವೈದ್ಯಕೀಯ ಕಾಲೇಜು ಗ್ರಂಥಾಲಯ ಪಕ್ಕ), ಬೆಂಗಳೂರು.

## ಪತ್ರಿಕಾ ಪ್ರಕಟಣೆ

**ಸಂಖ್ಯೆ: 934/1034**

## ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 03, (ಕರ್ನಾಟಕ ವಾರ್ತೆ) :

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು 2018–19 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಾತಿಯನ್ನು ಆರಂಭಿಸಿದ್ದು, ಸ್ನಾತಕ/ಸ್ನಾತಕೋತ್ತರ ಕೋರ್ಸ್‌ಗಳಾದ ಪ್ರಥಮ

ಬಿ.ಎ./ಬಿ.ಕಾಂ, ಎಂ.ಎ./ಎಂ.ಕಾಂ ಬಿ.ಎಲ್.ಐ.ಸಿ. ಎಂ.ಎಲ್.ಐ.ಸಿ. ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ(ಎಂ.ಸಿ.ಜೆ) ಹಾಗೂ ಎಂ.ಎಸ್ಸಿ (ಪರಿಸರ ವಿಜ್ಞಾನ) ಕೋರ್ಸ್‌ಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕರಾಮುವಿ ಬೆಂಗಳೂರಿನಲ್ಲಿ ಎರಡು ಪ್ರಾದೇಶಿಕ ಕೇಂದ್ರಗಳನ್ನು ಹೊಂದಿದ್ದು, ಚಾಮರಾಜಪೇಟೆ ಹಾಗೂ ಮಲ್ಲೇಶ್ವರಂ ಈ ಎರಡು ಕಡೆಗಳಲ್ಲಿ ಮಾತ್ರ ಪ್ರಥಮ ಬಿ.ಎ./ಬಿ.ಕಾಂ/ಎಂ.ಎ./ಎಂ.ಕಾಂ ಪದವಿಗಳಿಗೆ ಪ್ರವೇಶ ಪಡೆಯಲು ತಿಳಿಸಲಾಗಿದೆ.

ವಿದ್ಯಾರ್ಥಿಗಳು ಪ್ರಾದೇಶಿಕ ಕೇಂದ್ರಗಳಲ್ಲದೆ ಬೇರೆ ಯಾವುದೇ ಅನಧಿಕೃತ ಅಧ್ಯಯನ ಕೇಂದ್ರಗಳಲ್ಲಿ ಅರ್ಜಿಗಳನ್ನು ಖರೀದಿಸಿ ಪ್ರವೇಶಾತಿ ಪಡೆದು ವಂಚನೆಗೊಳಗಾಗಬಾರದೆಂದು, ಅರ್ಹ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ www.ksoumysore.karnataka.gov.in ನಿಂದ ಅರ್ಜಿ, ವಿವರಣಾ ಪುಸ್ತಕ ಹಾಗೂ ಶುಲ್ಕ ಪಾವತಿಸುವ ಚಲನ್ ಅನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದೆಂದು ಪ್ರಾದೇಶಿಕ ನಿರ್ದೇಶಕ ಗಿರೀಶ್ ಹೆಚ್.ಎನ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿ.ಪಿ.ಎಲ್. ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕದಲ್ಲಿ ಮಾತ್ರ ಶೇಕಡ 25 ರಷ್ಟು ವಿನಾಯಿತಿ ನೀಡಲಾಗುವುದು ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳನ್ನು ಒದಗಿಸಿದ್ದಲ್ಲಿ ಪ್ರವೇಶಾತಿ ಶುಲ್ಕದಲ್ಲಿ ವಿನಾಯಿತಿ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ನಿರ್ದೇಶಕರು, ಬೆಂಗಳೂರು ಪ್ರಾದೇಶಿಕ ಕೇಂದ್ರ, ನಂ. 61, 5 ನೇ ಮುಖ್ಯ ರಸ್ತೆ, 5 ನೇ ಅಡ್ಡರಸ್ತೆ, ಚಾಮರಾಜಪೇಟೆ, ಬೆಂಗಳೂರು-18 ಕಛೇರಿಗೆ ದೂರವಾಣಿ ಸಂಖ್ಯೆ 080- 26603664 ಮೊಬೈಲ್ ಸಂಖ್ಯೆ 9448668880 ನ್ನು ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 935/1035**

# ಮೂಲ ದಾಖಲೆ ಪರಿಶೀಲನೆ

ಬೆಂಗಳೂರು, ಸೆಪ್ಟೆಂಬರ್ 03, (ಕರ್ನಾಟಕ ವಾರ್ತೆ) :

2017-18 ನೇ ಸಾಲಿನಲ್ಲಿ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ (ಹೈದರಾಬಾದ್ ಕರ್ನಾಟಕ, ರಾಜ್ಯಮಟ್ಟದ ವೃಂದ ಮತ್ತು ಇತರೆ ಮೂಲ ವೃಂದ)

ಬೆಂಗಳೂರು ಉತ್ತರ ಜಿಲ್ಲೆಯಲ್ಲಿ ಆಯ್ಕೆಗೊಂಡಿದ್ದು ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ನಿಮ್ಮ ಮೂಲ ದಾಖಲಾತಿಗಳೊಂದಿಗೆ ಪರಿಶೀಲನೆಗೆ ದಿನಾಂಕ 3-9-2018 ರಿಂದ ದಿನಾಂಕ 7-9-2018 ರವರೆಗೆ ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ ಕೆ.ಜಿ. ರಸ್ತೆ, ಬೆಂಗಳೂರು ಇಲ್ಲಿ ಕಛೇರಿಯ ವೇಳೆಯಲ್ಲಿ ಹಾಜರಾಗಿ ಮೂಲ ದಾಖಲೆಗಳನ್ನು ಪರಿಶೀಲನೆಗೆ ಒದಗಿಸಿ ಪರಿಶೀಲಿಸಿಕೊಳ್ಳುವಂತೆ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 936/1036**

# ತಾತಾಲ್ಕಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು,, ಸೆಪ್ಟೆಂಬರ್ 3, (ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು ಆಯುಷ್ ನಿರ್ದೇಶನಾಲಯದ ಆಯುಷ್ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರು (ಆಯುರ್ವೇದ) – ಪಂಚ ಕರ್ಮ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ 31/08/2018 ರಂದು ಮತ್ತು ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಪದವಿಪೂರ್ವ ಕಾಲೇಜುಗಳಲ್ಲಿನ/ವಸತಿ ಶಾಲೆಗಳಲ್ಲಿನ ಪ್ರಾಂಶುಪಾಲರು, ಮತ್ತು ಅಲ್ಪಸಂಖ್ಯಾತರ ನಿರ್ದೇಶನಾಲಯದ ಮಾದರಿ ವಸತಿ ಶಾಲೆಗಳಲ್ಲಿನ ಪ್ರಾಂಶುಪಾಲರು/ಉಪ ಪ್ರಾಂಶುಪಾಲರು, ಗಣಿಕ ಮತ್ತು ಭೂವಿಜ್ಞಾನ ಇಲಾಖೆಯಲ್ಲಿನ ಭೂವಿಜ್ಞಾನಿ, ಪೌರಾಡಳಿತ ನಿರ್ದೇಶನಾಲಯದ ಮಹಾನಗರಪಾಲಿಕೆಗಳಲ್ಲಿನ/ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಸಹಾಯಕ ಅಭಿಯಂತರರು (ಸಿವಿಲ್), ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯಲ್ಲಿನ ಭೂದಾಖಲೆಗಳ ಸಹಾಯಕ ನಿರ್ದೇಶಕರು (ಕಾರ್ಯನಿರ್ವಾಹಕ) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ದಿನಾಂಕ: 01-09-2018 ರಂದು ಆಯೋಗದ ಅಂತರ್ಜಾಲ "http://kpsc.kar.nic.in/Selection Lists" ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಆಯ್ಕೆಪಟ್ಟಿಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಪ್ರಾಧ್ಯಾಪಕರು (ಆಯುರ್ವೇದ) ಪಂಚಕರ್ಮ ಹುದ್ದೆಗೆ ದಿನಾಂಕ: 06-09-2018 ಮತ್ತು ಉಳಿದ ಹುದ್ದೆಗಳಿಗೆ ದಿನಾಂಕ: 07-09-2018 ರೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದೆಂದು ಹಾಗೂ ನಿಗದಿತ ದಿನಾಂಕದ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 937/1037**

# ಕೈಗಾರಿಕಾ ತರಬೇತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು,, ಸೆಪ್ಟೆಂಬರ್ 3, (ಕರ್ನಾಟಕ ವಾರ್ತೆ) :

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ವತಿಯಿಂದ ಹೊಸೂರು ರಸ್ತೆಯಲ್ಲಿನ ಸರ್ಕಾರಿ ಮಾದರಿ ಕೈಗಾರಿಕಾ ತರಬೇತಿ ಸಂಸ್ಥೆ ಇಲ್ಲಿ 2018-19 ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ವೃತ್ತಿಗಳಲ್ಲಿ ಖಾಲಿ ಸ್ಥಾನಗಳ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳನ್ನು ಭರ್ತಿಮಾಡಿಕೊಳ್ಳಲು ಅರ್ಜಿಯನ್ನು ಆಹ್ವಾನಿಸಿದೆ.

NCVT – Computer Programming Assistant (1 year trade) – 16, NCVT-Dress Making (1 tear trade)-11, NCVT – Welder (1year trade) – 56, NCVT-Draughtsman Civil – 17, NCVT – Draughtseman Mechanic-15, NCVT-Information Communication Technology System Maintenance – 16, NCVT-Machinist-0, NCVT- Tool and Die Maker (Jigs & Fixture) – 3 and NCVT-Turner -9. Total – 143.

ಪ್ರವೇಶದ ಬೋಧನಾ ಮತ್ತು ಪರೀಕ್ಷ ಶುಲ್ಕವಾಗಿ ಒಂದು ವರ್ಷದ ಕೋರ್ಸಿಗೆ ರೂ 1500/- ಹಾಗೂ ಎರಡು ವರ್ಷದ ಕೋರ್ಸಿಗೆ ರೂ. 1750/- ಆಗಿರುತ್ತದೆ ಎಂದು ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ನೇರವಾಗಿ ಕಚೇರಿ ಹಾಗೂ ಪ್ರಾಚಾರ್ಯರಲ್ಲಿ ಸಂಪರ್ಕಿಸಬಹುದಾಗಿದ್ದು ದೂರವಾಣಿ ಸಂಖ್ಯೆ: 080-26562307 ಮೂಲಕ ಮಾಹಿತಿಯನ್ನು ಪಡೆಯಬಹುದಾಗಿದೆ.

**ಸಂಖ್ಯೆ: 938/1038**

# ಪರಿಹಾರ ಮೊತ್ತ ನಿಗದಿ

ಬೆಂಗಳೂರು,, ಸೆಪ್ಟೆಂಬರ್ 3, (ಕರ್ನಾಟಕ ವಾರ್ತೆ) :

ಅರಣ್ಯ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳು ದಿನದ 24 ಗಂಟೆ ಅರಣ್ಯ ಹಾಗೂ ವನ್ಯಪ್ರಾಣಿಗಳ ರಕ್ಷಣೆ ಕಾರ್ಯದಲ್ಲಿ ತೊಡಗಿಸಿಕೊಂಡು ಕ್ಲಿಷ್ಟಕರ ಸನ್ನಿವೇಶಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರಣ್ಯ ರಕ್ಷಕ, ಅರಣ್ಯ ವೀಕ್ಷಕ/ಕಾವಲುಗಾರ, ಉಪ ವಲಯ ಅರಣ್ಯಾಧಿಕಾರಿ ಹಾಗೂ ವಲಯ ಅರಣ್ಯಾಧಿಕಾರಿಗಳಿಗೆ ಮಾತ್ರ ಅನ್ವಯವಾಗುವಂತ ಕರ್ತವ್ಯದಲ್ಲಿರುವ ಮರಣ ಹೊಂದಿದರೆ, ಶಾಶ್ವತ

ಅಂಗವಿಕಲತೆ ಹೊಂದಿದರೆ ಅಥವಾ ಗಂಭೀರ ಸ್ವರೂಪ ಗಾಯಗೊಂಡಲ್ಲಿ ಅವರಿಗೆ ಪರಿಹಾರ ನೀಡುವ ಸಲುವಾಗಿ ಸರ್ಕಾರವು ಅದೇಶ ಹೊರಡಿಸಿದೆ. ಮರಣ ಹೊಂದಿದಲ್ಲಿ 20.00 ಲಕ್ಷ ರೂ, ಶಾಶ್ವತ ಅಂಗವೈಕಲ್ಯತೆಗೆ 10.00 ಲಕ್ಷ ರೂ, ಗಂಭೀರ ಸ್ವರೂಪದಲ್ಲಿ ಗಾಯಗೊಂಡಲ್ಲಿ 2.00 ಲಕ್ಷ ರೂ. ಗಳನ್ನು ನಿಗದಿಪಡಿಸಿದೆ.

ಅರಣ್ಯ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅರಣ್ಯ ರಕ್ಷಕ, ಅರಣ್ಯ ವೀಕ್ಷಕ/ಕಾವಲುಗಾರ, ಉಪ ವಲಯ ಅರಣ್ಯಾಧಿಕಾರಿ ಹಗೂ ವಲಯ ಅರಣ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿರುವ ಸಂದರ್ಭದಲ್ಲಿ ಮರಣ ಹೊಂದಿದರೆ ವಿಶೇಷ ಗುಂಪು ವಿಮಾ ಮೊತ್ತ ರೂ 10.00 ಲಕ್ಷಗಳಿಗೆ (ಹತ್ತು ಲಕ್ಷ ರೂಪಾಯಿಗಳು ಮಾತ್ರ) ಹಾಗೂ ಕ್ಷೇಮಾಭಿವೃದ್ಧಿ ಹಾಗೂ ಹಂಗಾಮಿ ನೌಕರರಿಗೆ ವಿಶೇಷ ಗುಂಪು ವಿಮಾ ಮೊತ್ತ ರೂ 5.00 ಲಕ್ಷ ಗಳಿಗೆ (ಐದು ಲಕ್ಷ ರೂಪಾಯಿಗಳು ಮಾತ್ರ) ನಿಗದಿಗೊಳಿಸಿ ಸರ್ಕಾರವು ಆದೇಶವನ್ನು ಹೊರಡಿಸಿರುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 939/1039**

## 2018-19 ನೇ ಸಾಲಿನಲ್ಲಿ ವೃತ್ತಿನಿರತ ಕುಶಲಕರ್ಮಿಗಳಿಗೆ ವಿಶೇಷ ಯೋಜನೆಯಡಿ ವಸತಿ ಕಾರ್ಯಾಗಾರ

ಬೆಂಗಳೂರು,, ಸೆಪ್ಟೆಂಬರ್ 3, (ಕರ್ನಾಟಕ ವಾರ್ತೆ) :

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು 2018-19 ನೇ ಸಾಲಿಗೆ ಜಿಲ್ಲಾ ಕೈಗಾರಿಕಾ ಕೇಂದ್ರ, ಬೆಂಗಳೂರು ನಗರ ಜಿಲ್ಲೆಯ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 10 ಕೊನೆಯ ದಿನವಾಗಿದೆ.

ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದ ನಿಗಧಿತ ಅರ್ಜಿ, ಫಲಾನುಭವಿಯ ಪಾಸ್‌ಪೋರ್ಟ್ ಅಳತೆ 2 ಫೋಟೋ, ಆಧಾರ ಕಾರ್ಡ್, ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣಪತ್ರ, ಬ್ಯಾಂಕ್ ಪಾಸ್‌ಬುಕ್ ಪ್ರತಿ, ವೃತ್ತಿನಿರತ ಕುಶಲಕರ್ಮಿ ಪ್ರಮಾಣ ಪತ್ರ, ಕುಶಲಕರ್ಮಿ ಪುರುಷರಾದಲ್ಲಿ ಅವರ ಪತ್ನಿಯ ಹೆಸರಿನಲ್ಲಿ ಸ್ವಂತ ನಿವೇಶನದ ದಾಖಲಾತಿಗಳು ಹಾಗೂ ಗ್ರಾಮ ಪಂಚಾಯಿತಿಯಿಂದ ಮನೆರಹಿತ ಪ್ರಮಾಣ ಪತ್ರ ದಾಖಲೆಗಳನ್ನು ಸಲ್ಲಿಸಬೇಕಾಗಿದೆ.

ಹೆಚ್ಚಿನ ವಿವರಗಳಿಗಾಗಿ ಜಂಟಿ ನಿರ್ದೇಶಕರ ಕಚೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ, ಬೆಂಗಳೂರು ನಗರ ಜಿಲ್ಲೆ, ರಾಜಾಜಿನಗರ ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು – 560 010, ದೂರವಾಣಿ ಸಂಖ್ಯೆ 23501481, 23501478 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಈ ಯೋಜನೆಯನ್ವಯ ಪ್ರತಿ ವಸತಿ ಕಾರ್ಯಗಾರದ ನಿರ್ಮಾಣ ವೆಚ್ಚ ಗ್ರಾಮೀಣ ಪ್ರದೇಶದವರಿಗೆ ರೂ 3.00 ಲಕ್ಷ ಹಾಗೂ ನಗರ ಪ್ರದೇಶದವರಿಗೆ ರೂ 3.25 ಲಕ್ಷಗಳನ್ನು ನಿಗದಿಪಡಿಸಲಾಗಿದೆ. ಈ ನಿರ್ಮಾಣ ವೆಚ್ಚದಲ್ಲಿ ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದ ಮೂಲಕ ಗ್ರಾಮೀಣ ಪ್ರದೇಶದರಿಗೆ ರೂ 1.75 ಲಕ್ಷ ಮತ್ತು ನಗರದ ಪ್ರದೇಶದವರಿಗೆ ರೂ 2.00 ಲಕ್ಷ ಭರಿಸಲಾಗುವುದು. ರೂ 1.00 ಲಕ್ಷ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು ಸಹಾಯಧನವಾಗಿ ಭರಿಸಲಾಗುವುದು. ಉಳಿದ ಮೊತ್ತ ಫಲಾನುಭವಿಯು ವಂತಿಕೆ ಮೂಲಕ ಭರಿಸುವುದು.

2018-19ನೇ ಸಾಲಿನಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು ವೃತ್ತಿನಿರತ ಕುಶಲಕರ್ಮಿಗಳಿಗೆ ವಿಶೇಷ ಘಟಕ ಯೋಜನೆ, ಗಿರಿಜನ ಉಪಯೋಜನೆಯಡಿ ವಸತಿ ಕಾರ್ಯಗಾರಗಳನ್ನು ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದಿಂದ ವಸತಿ ರಹಿತ ಕುಶಲಕರ್ಮಿಗಳಿಗೆ ವಸತಿ ಕಾರ್ಯಗಾರ ಒದಗಿಸುವ ಯೋಜನೆಯನ್ನು ಮಂಜೂರು ಮಾಡಿರುತ್ತದೆ.

## ಬೆಂಗಳೂರು ಜಲಮಂಡಲಿ : ಸೆಪ್ಟೆಂಬರ್ 04 ರಂದು (ಪಶ್ಚಿಮ-1) (ಆಗ್ನೇಯ-1) ಮತ್ತು (ನೈರುತ್ಯ-1) ಉಪವಿಭಾಗಗಳಲ್ಲಿ ನೀರಿನ ಅದಾಲತ್

ಬೆಂಗಳೂರು ಜಲಮಂಡಲಿಯ (ಪಶ್ಚಿಮ-1) (ಆಗ್ನೇಯ-1) ಮತ್ತು (ನೈರುತ್ಯ-1) ಉಪವಿಭಾಗಗಳಲ್ಲಿ 04.09.2018 ರಂದು ಮಂಗಳವಾರ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತ್ತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್‌ಅನ್ನು ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ ನಡೆಸಲಾಗುತ್ತದೆ.

ದಿನಾಂಕ:04.09.2018 ರಂದು (ಪಶ್ಚಿಮ-1) ಉಪ ವಿಭಾಗದ ವ್ಯಾಪ್ತಿಯ ಮಾಗಡಿ ರಸ್ತೆ 1&2, ಹೊಸಹಳ್ಳಿ ಪಂಪ್‌ಹೌಸ್, ಮೈಸೂರು ರಸ್ತೆ, ಸೇವಾ ಠಾಣೆ ವ್ಯಾಪ್ತಿಯ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೆಲಮಹಡಿ, ಅರ್ಕಾವತಿ ಭವನ, 5ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, ಆರ್.ಪಿ.ಸಿ ಲೇಔಟ್ ಇಲ್ಲಿನ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಪಶ್ಚಿಮ-1) ಕಚೇರಿಯಲ್ಲಿ ಸಮಸ್ಯೆಗಳನ್ನು ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗೆ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ:ಕಾರ್ಯನಿರ್ವಾಹಕ ಅಭಿಯಂತರರು (ಪಶ್ಚಿಮ)22349171. ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಪಶ್ಚಿಮ-1) ಉಪವಿಭಾಗ-23500013

(ಆಗ್ನೇಯ-1) ಉಪ ವಿಭಾಗದ ವ್ಯಾಪ್ತಿಯ ಹಲಸೂರು, ದೊಮ್ಮಲೂರು, ಸಿ.ಎಲ್.ಆರ್, & ಜಾನ್ಸನ್ ಮಾರ್ಕೆಟ್ ಸೇವಾ ಠಾಣೆ ವ್ಯಾಪ್ತಿಯ ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಆಡೋ ಮಹಲ್ ಎದುರು, ಹಳೆ ಮದ್ರಾಸ್ ರಸ್ತೆ, ಇಲ್ಲಿನ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಆಗ್ನೇಯ-1) ಕಚೇರಿಯಲ್ಲಿ ಸಮಸ್ಯೆಗಳನ್ನು ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗೆ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ:ಕಾರ್ಯನಿರ್ವಾಹಕ ಅಭಿಯಂತರರು (ಆಗ್ನೇಯ-1) 22945169. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಆಗ್ನೇಯ-1) 22945169

(ನೈರುತ್ಯ-1) ಉಪ ವಿಭಾಗದ ವಿ.ವಿ.ಪುರಂ, ಸುಧಾಮನಗರ-2, ಕೆಂಪೇಗೌಡನಗರ, ಜಗ ಜೀವನ್‌ರಾಮ್ ನಗರ, ಚಾಮರಾಜ ಪೇಟೆ ಸೇವಾ ಠಾಣೆ ವ್ಯಾಪ್ತಿಯ ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ವಿ.ವಿ.ಪುರಂ ಇಲ್ಲಿನ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ನೈರುತ್ಯ-1) ಕಚೇರಿಯಲ್ಲಿ ಸಮಸ್ಯೆಗಳನ್ನು ಪರಿಶೀಲಿಸಿ ಬಗೆಹರಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗೆ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ:ಕಾರ್ಯನಿರ್ವಾಹಕ ಅಭಿಯಂತರರು (ನೈರುತ್ಯ) 22945196 ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ನೈರುತ್ಯ-1) ಉಪವಿಭಾಗ 22945193.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರುನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ-22238888, ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ-8762228888 ಗೆ ಸಂಪರ್ಕಿಸಬಹುದಾಗಿದೆ.

ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯ ಬಳಸಿಕೊಳ್ಳ ಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## BWSSB:Water Adalath in West-1, South East-1 & South West-1 sub divisions on September 4th

*******

BWSSB water Adalath is held on 04.09.2018 in (West-1), (South East-1) & (South West-1) sub divisions from 9:30.am to 11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues.

The disputes of consumers of Magadi Road, 1 & 2 Hosahalli Pump House, Mysore Road, service station coming under (West-1) sub division, will be discussed in detail & problems will be settled in the office of the Assistant Executive Engineer (West-1) sub division, Ground floor, Arkavathi Bhavan 5th Main, 9th cross, RPC Layout.

Details regarding the adalath can be obtained by the office of EE(West) :22945171, or office of AEE (West-1) 23500013.

The disputes of consumers of Halasoor, Domlur, CLR & Jhonson Market, service station coming under (South East-1) sub division, will be discussed in detail & problems will be settled in the office of the Assistant Executive Engineer (South East-1) sub division Old Madras Road Opposite Lido Mall.

Details regarding the adalath can be obtained by the office of EE(South East-1) :22945169, or office of AEE (South East-1) 22945169.

The disputes of consumers of V.V Puram, Sudhamanagara,-2, Kempegowda Nagar, Jaga jeevan Ram Nagar, Chamarajapet, service station coming under (South West-1) sub division, will be discussed in detail & problems will be settled in the office of the Assistant Executive Engineer (South West-1) sub division VV Puram.

Details regarding the adalath can be obtained by the office of EE (South West) :22945196, or office of AEE (South West-1) 22945193.

For any problems regarding the water supply and all, public can contact 24x7 call centre :22238888 helpline number:1916 & whats app no: 8762228888.

Public can utilize this adalath facilities to solve the problems regarding water supply.